## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1229
2. ಸದಸ್ಯರ ಹೆಸರು : ಶ್ರೀ ಅ.ದೇವೇಗೌಡ
3. ಉತ್ತರಿಸುವ ದಿನಾಂಕ : 23-12-2021
4. ಉತ್ತರಿಸುವವರು : ಮುಖ್ಯಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರ, ಚಾಮರಾಜಪೇಟೆ ವಾರ್ಡ್ ಸಂಖ್ಯೆ: 140, ನಂಜಾಂಬ ಅಗ್ರಹಾರದಲ್ಲಿರುವ, ಐತಿಹಾಸಿಕ 'ನಾಡಪ್ರಭು ಕೆಂಪೇಗೌಡ ಗೋಪುರ' ಪ್ರಾಚ್ಯ ವಸ್ತು ಇಲಾಖೆಯ ಸಂರಕ್ಷಣೆಯಲ್ಲಿದ್ದು, ಈ ಐತಿಹಾಸಿಕ ಸ್ಥಳದಲ್ಲಿ ಅನಧಿಕೃತವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಸೇರಿದಂತೆ, ಹಲವಾರು ಪ್ರಭಾವಿ ವ್ಯಕ್ತಿಗಳು ಕಟ್ಟಡಗಳನ್ನು ನಿರ್ಮಿಸಿ ಸ್ಥಳದ ಪಾವಿತ್ರ್ಯಕ್ಕೆ ಧಕ್ಕೆ ತಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ನಗರ, ಚಾಮರಾಜಪೇಟೆ ವಾರ್ಡ್ ನಂ. 140 ನಂಜಾಂಬ ಅಗ್ರಹಾರದಲ್ಲಿರುವ ಐತಿಹಾಸಿಕ 'ನಾಡಪ್ರಭು ಕೆಂಪೇಗೌಡ ಗೋಪುರ' ಪ್ರಾಚ್ಯ ವಸ್ತು ಇಲಾಖೆ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಈ ಐತಿಹಾಸಿಕ ಸ್ಥಳದಲ್ಲಿ ಅನಧೀಕೃತವಾಗಿ ಕಟ್ಟಡ ನಿರ್ಮಾಣ ಮಾಡಿರುವುದು ಕಂಡುಬಂದಿರುವುದಿಲ್ಲ ಹಾಗೂ ನಂಜಾಂಬ ಅಗ್ರಹಾರ ಪ್ರದೇಶದಲ್ಲಿ ಅಂಗನವಾಡಿ ಕೇಂದ್ರ ನಿರ್ಮಾಣ ಮಾಡಲು ಪಾಲಿಕೆಯ ಸ್ವತ್ತು ಲಭ್ಯವಿಲ್ಲದ ಕಾರಣ ಸಾರ್ವಜನಿಕರ ಹಿತದೃಷ್ಟಿಯಿಂದ ಈ ಸ್ಥಳದಲ್ಲಿ ಅಂಗನವಾಡಿ ಕೇಂದ್ರ ನಿರ್ಮಾಣ ಮಾಡಿದ್ದು, ತಾತ್ಕಾಲಿಕವಾಗಿ ಬಿ.ಬಿ.ಎಂ.ಪಿ.ಯ ಕಾಮಗಾರಿ ಇಲಾಖೆ ಕಛೇರಿಗಳು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುತ್ತವೆ. |
| ಆ | ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

**ಸಂಖ್ಯೆ: ನಅಇ 258 ಬಿಬಿಎಲ್ 2021(ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ.